# ಕರ್ನಾಟಕ ವಿಧಾನ ಪರಿಷತ್ತು

1] ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 804

2] ಮಾನ್ಯ ಸದಸ್ಯರ ಹೆಸರು : ಶ್ರೀ ಎಂ.ಎಲ್.ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)

3] ಉತ್ತರಿಸುವ ದಿನಾಂಕ : 13/03/2025

4] ಉತ್ತರಿಸುವ ಸಚಿವರು : ಗೃಹ ಸಚಿವರು

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಒಂದು ತಾಲ್ಲೂಕಿನಲ್ಲಿ ಅಥವಾ ಹೋಬಳಿಗಳಲ್ಲಿ ಹೊಸ ಪೊಲೀಸ್ ಠಾಣೆಯನ್ನು ತೆರೆಯಲು ಇರುವ ಮಾನದಂಡಗಳೇನು: (ಸಂಪೂರ್ಣವಾದ ಮಾಹಿತಿ ನೀಡುವುದು)</td><td>2ನೇ ರಾಷ್ಟ್ರೀಯ ಪೊಲೀಸ್ ಆಯೋಗದ ಶಿಫಾರಸ್ಸಿನನ್ವಯ ಹೊರಡಿಸಲಾದ ಸುತ್ತೋಲೆ ಸಂಖ್ಯೆ: ಆರ್.ಎಲ್.ಎನ್(5) 2/2017-18, ದಿನಾಂಕ: 28-12-2017ರನ್ವಯ ನೂತನ ಪೊಲೀಸ್ ಠಾಣೆಯನ್ನು ತೆರೆಯಲು ಕೆಳಕಂಡ ಮಾನದಂಡಗಳನ್ನು ನಿಗದಿಪಡಿಸಲಾಗಿದೆ:-<br>1. 75 ಚ.ಮೈಲು/150 ಚ.ಕಿ.ಮೀ. ವಿಸ್ತೀರ್ಣ.<br>2. 300ಕ್ಕೂ ಹೆಚ್ಚು ಅಪರಾಧ ಪ್ರಕರಣಗಳು (ವಾರ್ಷಿಕ).<br>3. 50,000 ರಿಂದ 60,000 ಜನಸಂಖ್ಯೆ.</td></tr>
<tr><td>ಆ)</td><td>ಕೋಲಾರ ಜಿಲ್ಲೆಯಲ್ಲಿ ಹೊಸ ಪೊಲೀಸ್ ಠಾಣೆಯನ್ನು ತೆರೆಯಲು ಸರ್ಕಾರದ ಮುಂದೆ ಯಾವುದಾದರೂ ಪ್ರಸ್ತಾವನೆ ಇದೆಯೇ: (ಸಂಪೂರ್ಣವಾದ ಮಾಹಿತಿ ನೀಡುವುದು)</td><td rowspan="2">ಕೋಲಾರ ಜಿಲ್ಲೆ, ವೇಮಗಲ್ ಪೊಲೀಸ್ ಠಾಣಾ ವ್ಯಾಪ್ತಿಯ ನರಸಾಪುರ ಹೊರಠಾಣೆಯನ್ನು ಪೂರ್ಣ ಪ್ರಮಾಣದ ಪೊಲೀಸ್ ಠಾಣೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯು ಇಲಾಖಾ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ.</td></tr>
<tr><td>ಇ)</td><td>ಕೋಲಾರ ಜಿಲ್ಲೆ ನರಸಾಪುರ ಕೈಗಾರಿಕಾ ಪ್ರದೇಶಗಳಲ್ಲಿ ಸುಮಾರು 15 ಸಾವಿರದಿಂದ 20 ಸಾವಿರ ಜನಗಳ ಓಡಾಟವಿದ್ದು: ಈ ಪ್ರದೇಶಗಳಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಠಾಣೆಯ ಅಗತ್ಯವಿದ್ದು, ಈ ಜಾಗದಲ್ಲಿ ಪೊಲೀಸ್ ಠಾಣೆಯನ್ನು ತೆರೆಯಲು ಸರ್ಕಾರ ಚಿಂತಿಸಿದೆಯೇ: ಇಲ್ಲದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಪೊಲೀಸ್ ಠಾಣೆಯನ್ನು ತೆರೆಯಲಾಗುವುದು? (ಸಂಪೂರ್ಣವಾದ ಮಾಹಿತಿ ನೀಡುವುದು)</td></tr>
</table>

**ಸಂಖ್ಯೆ: ಹೆಚ್‌ಡಿ 39 ಪಿಓಪಿ 2025**

**(ಡಾ॥ ಜಿ.ಪರಮೇಶ್ವರ)**
ಗೃಹ ಸಚಿವರು.